# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆ ಭರ್ತಿಯಾದ್ದರಿಂದ ವೇತನ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಆರ್ಥಿಕ ಇಲಾಖೆ ವೆಚ್ಚ 7 ಶಾಖೆಯ ಕಡತ ಸಂಖ್ಯೆ: ಆಇ 485 ವೆಚ್ಚ 7/2021(ಇ)

ಪ್ರಸ್ತಾವನೆ:

ವಿವಿಧ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆ ಭರ್ತಿಯಾದ್ದರಿಂದ ವೇತನ ಪಾವತಿಗಾಗಿ ಅಗತ್ಯವಿರುವ ರೂ.24.61ಲಕ್ಷಗಳನ್ನು ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2205-00-101-0-27-005ರಡಿ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಕಡತದಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ಪ್ರಸ್ತಾವಿತ ವೆಚ್ಚಕ್ಕಾಗಿ ರೂ.~~7.00~~ 24.61 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 390 ವೆಚ್ಚ 6/2021(ಇ) ದಿನಾಂಕ: 30ನೇ ಜುಲೈ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ ವೇತನ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ24.61ಲಕ್ಷ (ರೂಪಾಯಿ ಇಪ್ಪತ್ನಾಲ್ಕು ಲಕ್ಷದ ಅರವತ್ತೊಂದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಹಾಸನ | 2205-00-101-0-27-005 | 5.40 |
| 2 | ಬೆಳಗಾವಿ | 2205-00-101-0-27-005 | 5.29 |
| 3 | ಬಾಗಲಕೋಟೆ | 2205-00-101-0-27-005 | 5.80 |
| 4 | ಧಾರವಾಡ | 2205-00-101-0-27-005 | 8.12 |
| | **ಒಟ್ಟು** | | **24.61** |

1416713589
30.7.21

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)

ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ

ಸರ್ಕಾರದ ಜಂಟಿ ಕಾರ್ಯದರ್ಶಿ

ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ

3.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್/ಯುವಜನ ಸೇವೆ&ಕ್ರೀಡಾ ಇಲಾಖೆ

4. ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,

5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು

6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು,

7. ರಕ್ಷಾ ಕಡತ

8. ಹೆಚ್ಚುವರಿ ಪ್ರತಿ